SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar
UINIVERSITY LIBRARY & LEARNING RESOURCE CENTRE

SDUAHER

Online Newspaper Clipping Service

**Dated, Sunday 15th January – 2017**



ಪ್ರಜಾವಾಣಿ

### ಕೆಇಎ ಮೂಲಕ ಮಾತ್ರ ಕೌನ್ಸೆಲಿಂಗ್ – ಸರ್ಕಾರ ನಿರ್ಧಾರ

# ಏಕರೂಪದ ಕೌನ್ಸೆಲಿಂಗ್‌ಗೆ ಮೂಡದ ಒಮ್ಮತ

• ವಿರೂಪಾಕ್ಷ ಹೊಕ್ರಾಣಿ

ಬೆಂಗಳೂರು: ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕೆ ದೇಶದಾದ್ಯಂತ ಏಕರೂಪದ ಪರೀಕ್ಷೆ ನಡೆದರೂ ಸಹ ಸೀಟು ಹಂಚಿಕೆ ಕೌನ್ಸೆಲಿಂಗ್ ಯಾರು ನಡೆಸಬೇಕು ಎಂಬುದರ ಬಗ್ಗೆ ಸರ್ಕಾರ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳ ಮಧ್ಯೆ ಈಗಲೇ ಗೊಂದಲ ಆರಂಭವಾಗಿದೆ.

ಸೀಟು ಹಂಚಿಕೆ ಕೌನ್ಸೆಲಿಂಗ್ ಸಂಬಂಧ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ ಪಾಟೀಲ ಅವರು ಖಾಸಗಿ ವೈದ್ಯಕೀಯ ಕಾಲೇಜು ಆಡಳಿತ ಮಂಡಳಿಯೊಂದಿಗೆ ಈಚೆಗೆ ಸಭೆ ನಡೆಸಿದ್ದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಏಕರೂಪದ ಕೌನ್ಸೆಲಿಂಗ್ ನಡೆಸುವ ಸರ್ಕಾರದ ಪ್ರಸ್ತಾಪಕ್ಕೆ ಖಾಸಗಿ ಕಾಲೇಜುಗಳು ಅಸಮ್ಮತಿ ಸೂಚಿಸಿವೆ ಎಂದು ತಿಳಿದುಬಂದಿದೆ.

ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕೆ ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ (ಸಿಬಿಎಸ್‌ಇ) ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ಎನ್‌ಇಇಟಿ) ನಡೆಸುತ್ತದೆ. ರ‍್ಯಾಂಕ್ ಪಟ್ಟಿ ಪ್ರಕಟಿಸಿದ ನಂತರ ಸಾಧ್ಯವಾದರೆ ಆಯಾ ರಾಜ್ಯ ಸರ್ಕಾರಗಳೇ ಏಕರೂಪದ ಕೌನ್ಸೆಲಿಂಗ್ ನಡೆಸಬೇಕು ಎಂದು ಭಾರತೀಯ ವೈದ್ಯಕೀಯ ಪರಿಷತ್ (ಎಂಸಿಐ) ಇತ್ತೀಚೆಗೆ ರಾಜ್ಯ ಸರ್ಕಾರಕ್ಕೆ ಸುತ್ತೋಲೆ ಕಳುಹಿಸಿದೆ.

ಕಳೆದ ವರ್ಷ ಎನ್‌ಇಇಟಿ ನಂತರ ಕೇಂದ್ರ ಸರ್ಕಾರಿ ಕೋಟಾದ ವೈದ್ಯಕೀಯ ಸೀಟುಗಳಿಗೆ ಏಕರೂಪದ ಕೌನ್ಸೆಲಿಂಗ್ ನಡೆಸಲು ಸರ್ಕಾರ ಪ್ರಯತ್ನ ನಡೆಸಿತಾದರೂ, ಖಾಸಗಿ ವೈದ್ಯಕೀಯ ಕಾಲೇಜುಗಳು ಒಪ್ಪದ ಕಾರಣ ಅದು ಸಾಧ್ಯವಾಗಲಿಲ್ಲ. ಇದರಿಂದಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಕಾಮೆಡ್-ಕೆ, ಧಾರ್ಮಿಕ ಅಲ್ಪಸಂಖ್ಯಾತ ಕಾಲೇಜುಗಳು, ಭಾಷಾ ಅಲ್ಪಸಂಖ್ಯಾತ ಕಾಲೇಜುಗಳು ಮತ್ತು 6 ಡೀಮ್ಡ್ ವಿಶ್ವವಿದ್ಯಾಲಯಗಳು ಪ್ರತ್ಯೇಕವಾಗಿ ಕೌನ್ಸೆಲಿಂಗ್ ನಡೆಸಿದ್ದವು. ಪರಿಣಾಮವಾಗಿ ವಿದ್ಯಾರ್ಥಿಗಳು ಒಟ್ಟು 10 ಕಡೆ ಅರ್ಜಿ ಭರ್ತಿ ಮಾಡಿ ಕೌನ್ಸೆಲಿಂಗ್‌ಗೆ ಓಡಾಡಬೇಕಾಯಿತು.

**ಕೆಇಎ ಮೂಲಕ ಕೌನ್ಸೆಲಿಂಗ್:** 'ಇದುವರೆಗೆ ಕರ್ನಾಟಕ ಪರೀಕ್ಷೆ ಪ್ರಾಧಿಕಾರ ಕೌನ್ಸೆಲಿಂಗ್ ನಡೆಸುತ್ತಾ ಬಂದಿದೆ. ಅದ್ದರಿಂದ ಮುಂದಿನ ಬಾರಿ ಸರ್ಕಾರಿ, ಖಾಸಗಿ, ಡೀಮ್ಡ್ ಮತ್ತು ಅಲ್ಪಸಂಖ್ಯಾತ ಕಾಲೇಜುಗಳ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜುಗಳ ಸೀಟು ಭರ್ತಿಗೆ ಪ್ರಾಧಿಕಾರದ ಮೂಲಕವೇ ಕೌನ್ಸೆಲಿಂಗ್ ನಡೆಸಲಾಗುವುದು. ಹಲವು ರಾಜ್ಯಗಳಲ್ಲಿ ಏಕರೂಪದ ಕೌನ್ಸೆಲಿಂಗ್ ಪದ್ಧತಿ ಇದೆ. ರಾಜ್ಯದಲ್ಲಿಯೂ ಅದನ್ನು ಜಾರಿ ಮಾಡಿದರೆ ವಿದ್ಯಾರ್ಥಿಗಳಿಗೆ ಅನುಕೂಲ ಆಗಲಿದೆ' ಎಂದು ವೈದ್ಯಕೀಯ ಶಿಕ್ಷಣ ಸಚಿವರು ಸಭೆಯಲ್ಲಿ ಖಾಸಗಿ ಕಾಲೇಜುಗಳ ಮನವೊಲಿಸುವ ಪ್ರಯತ್ನ ಮಾಡಿದ್ದಾರೆ.

ಆದರೆ, ಇದಕ್ಕೆ ಖಾಸಗಿ ಕಾಲೇಜು ಆಡಳಿತ ಮಂಡಳಿಗಳ ಮುಖ್ಯಸ್ಥರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ.

ವೈದ್ಯಕೀಯ ಕಾಲೇಜುಗಳ ಪ್ರವೇಶಕ್ಕೆ ಮೊದಲು ಕಾಮೆಡ್-ಕೆ ಪರೀಕ್ಷೆ ನಡೆಸಲಾಗುತ್ತಿತ್ತು. ಈಗ ಎನ್‌ಇಇಟಿ ಕಡ್ಡಾಯ ಮಾಡಲಾಗಿದೆ. ಕೌನ್ಸೆಲಿಂಗ್ ನಡೆಸುವ ಅವಕಾಶವನ್ನೂ ನಮ್ಮಿಂದ ಕಿತ್ತುಕೊಳ್ಳಲಾಗುತ್ತಿದೆ. ಈ ಸಂಬಂಧ ಕಾಲೇಜು ಪ್ರತಿನಿಧಿಗಳು ಪ್ರತ್ಯೇಕವಾಗಿ ಚರ್ಚಿಸಿ ಬಳಿಕ ಸರ್ಕಾರದ ಜೊತೆ ಚರ್ಚಿಸಲಾಗುವುದು ಎಂದು ಖಾಸಗಿ ಕಾಲೇಜುಗಳ ಆಡಳಿತ ಮಂಡಳಿ ಪ್ರತಿನಿಧಿಗಳು ಸರ್ಕಾರಕ್ಕೆ ಹೇಳಿದ್ದಾರೆ ಎನ್ನಲಾಗಿದೆ.

**ಮುಖ್ಯಾಂಶಗಳು**

- ಸರ್ಕಾರ ಮತ್ತು ಖಾಸಗಿ ಕಾಲೇಜುಗಳ ಮಧ್ಯೆ ಮೂಡದ ಒಮ್ಮತ
- ವೈದ್ಯಕೀಯ ಸೀಟು ವಿಷಯದಲ್ಲಿ ಮುಂದುವರಿದ ಗೊಂದಲ
- ಶೀಘ್ರದಲ್ಲಿಯೇ ಮತ್ತೊಂದು ಸಭೆ ನಡೆಸಲು ತೀರ್ಮಾನ

## ನಿರ್ಧಾರ ಮುಂದೆ ತಿಳಿಸುತ್ತೇವೆ: ಪಾಂಡುರಂಗಶೆಟ್ಟಿ

'ವೈದ್ಯಕೀಯ ಕೋರ್ಸ್‌ಗಳಿಗೆ ಏಕರೂಪದ ಕೌನ್ಸೆಲಿಂಗ್ ನಡೆಸುವುದಾಗಿ ಸರ್ಕಾರ ಹೇಳಿದೆ. ಆದರೆ, ನಮ್ಮ ನಿರ್ಧಾರ ಮುಂದಿನ ದಿನಗಳಲ್ಲಿ ಹೇಳುವುದಾಗಿ ಸಭೆಯಲ್ಲಿ ತಿಳಿಸಿದ್ದೇವೆ' ಎಂದು ಕರ್ನಾಟಕ ರಾಜ್ಯ ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜುಗಳ ಸಂಘದ ಪ್ರತಿನಿಧಿ ಎಂ.ಕೆ. ಪಾಂಡುರಂಗ ಶೆಟ್ಟಿ 'ಪ್ರಜಾವಾಣಿ'ಗೆ ತಿಳಿಸಿದರು.

ಕಾಮೆಡ್-ಕೆ ನಡೆಸುವ ಕೌನ್ಸೆಲಿಂಗ್ ಶಿಸ್ತುಬದ್ಧವಾಗಿದೆ. ಆದರೆ, ಕೆಲವು ಡೀಮ್ಡ್ ಕಾಲೇಜುಗಳು, ಭಾಷಾ ಹಾಗೂ ಧಾರ್ಮಿಕ ಅಲ್ಪಸಂಖ್ಯಾತ ಕಾಲೇಜುಗಳು ನಡೆಸಿದ ಪ್ರತ್ಯೇಕ ಕೌನ್ಸೆಲಿಂಗ್‌ನಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದಾಗಿ ಸಚಿವರು ತಿಳಿಸಿದ್ದಾರೆ. ಈ ಬಗ್ಗೆ ನಾವು ಚರ್ಚಿಸುತ್ತೇವೆ ಎಂದು ತಿಳಿಸಿದರು.